## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಡಾ॥ ಜಯರಾಂ ಎಂ. ಚವ್ಹಾಣ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕುಷ್ಟಗಿ ಇವರ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಕಾತಿ ಮಾಡುವ ಕುರಿತು

ಓದಲಾಗಿದೆ: 1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತಿ, ಕೊಪ್ಪಳ ಇವರ ಪತ್ರ ಸಂಖ್ಯೆ:ಜಿಪಂ.ಕೊ/ಸಿಸಿಎ/39/2011-12/1301 ದಿನಾಂಕ: 26-06-2013.

2. ಕಾರಣ ಕೇಳುವ ನೋಟೀಸು ದಿನಾಂಕ: 10-02-2014

3. ಡಾ॥ ಜಯರಾಂ ಎಂ. ಚವ್ಹಾಣ್, ಇವರ ಲಿಖಿತ ಹೇಳಿಕೆ ದಿನಾಂಕ: 28-03-2014

------

ಪ್ರಸ್ತಾವನೆ:

ಡಾ॥ ಜಯರಾಂ ಎಂ. ಚವ್ಹಾಣ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕುಷ್ಟಗಿ ಇವರು ಸದರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಕುಷ್ಟಗಿ ತಾಲ್ಲೂಕಿನ ಕ್ಯಾದಿಗುಪ್ಪ ಮತ್ತು ಕಂದಕೂರ ಗ್ರಾಮ ಪಂಚಾಯತ್‌ಗಳಲ್ಲಿ ಅತ್ಯಂತ ಮಹತ್ವದ ಯೋಜನೆಗಳಾದ ಎಂ.ಜಿ.ಎನ್.ಆರ್.ಇ.ಜಿ.ಎ, ಆಶ್ರಯ ಹಾಗೂ ಸಂಪೂರ್ಣ ನೈರ್ಮಲ್ಯದಂತಹ ಕಾರ್ಯಕ್ರಮಗಳ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಟಾನಗೊಳಿಸುವಲ್ಲಿ ಸರ್ಕಾರದ ಮಾರ್ಗಸೂಚಿಗಳಂತೆ ಯೋಜನೆಗಳ ಹಣಕಾಸು ವ್ಯವಹಾರಗಳನ್ನು ನಿರ್ವಹಿಸದೇ, ನಕಲಿ ಮಾಸ್ಟರ್ ರೂಲ್ ಮತ್ತು ವೇಜಲಿಸ್ಟನ್ನು ಸೃಷ್ಟಿಸಿ ಸರ್ಕಾರಕ್ಕೆ ರೂ. 62,76375/- ಗಳ ಆರ್ಥಿಕ ನಷ್ಟ ಉಂಟು ಮಾಡಿ, ತೀವ್ರತರ ಕರ್ತವ್ಯಲೋಪವೆಸಗಿರುವ ಆರೋಪಗಳ ಕುರಿತು ಶಿಸ್ತು ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತಿ ಕೊಪ್ಪಳ ಇವರು ಮೇಲೆ ಕ್ರಮ ಸಂಖ್ಯೆ(1) ರಲ್ಲಿ ಓದಲಾದ ದಿನಾಂಕ: 26-06-2013 ರಂದು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರು.

ಡಾ॥ ಜಯರಾಂ ಎಂ. ಚವ್ಹಾಣ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕುಷ್ಟಗಿ ಇವರು ಎಸಗಿರುವ ಕರ್ತವ್ಯಲೋಪಗಳ ಬಗ್ಗೆ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳ 1957ರ ನಿಯಮ 11 ರಡಿ ಶಿಸ್ತು ಕ್ರಮ ಜರುಗಿಸಲು ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣ ಪಟ್ಟಿಯ ಅನುಬಂಧ-1 ರಿಂದ 4 ನ್ನು ಮೇಲೆ ಓದಲಾದ ಕ್ರಮ ಸಂಖ್ಯೆ(2) ರಲ್ಲಿ ಜಾರಿ ಮಾಡಲಾಗಿತ್ತು. ಆರೋಪಿತ ಅಧಿಕಾರಿಯು ಮೇಲೆ ಓದಲಾದ ಕ್ರಮ ಸಂಖ್ಯೆ(3) ರಲ್ಲಿ ಲಿಖಿತ ಹೇಳಿಕೆಯನ್ನು ಸಲ್ಲಿಸುತ್ತಾ, ಅವರ ವಿರುದ್ಧದ ಆರೋಪಗಳನ್ನು ನಿರಾಕರಿಸಿ ಆರೋಪಗಳಿಂದ ದೋಷಮುಕ್ತಗೊಳಿಸಬೇಕೆಂದು ಕೋರಿರುತ್ತಾರೆ. ಸರ್ಕಾರವು ಸದರಿಯವರ ಲಿಖಿತ ಹೇಳಿಕೆಯನ್ನು ಪರಿಶೀಲಿಸಿದ್ದು, ಅದು ಸಮರ್ಥನೀಯವಾಗಿರುವುದಿಲ್ಲವಾದ್ದರಿಂದ, ಸದರಿ ಅಧಿಕಾರಿ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು ಕೂಲಂಕಷ ಇಲಾಖಾ ವಿಚಾರಣೆಯನ್ನು ಜರುಗಿಸಲು ನಿರ್ಧರಿಸಿ ಈ ಮುಂದಿನಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 146 ವಿಸೇಬಿ 2011 ಬೆಂಗಳೂರು ದಿನಾಂಕ:07-05-2014

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಡಾ॥ ಜಯರಾಂ ಎಂ. ಚವ್ಹಾಣ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕುಷ್ಟಗಿ ಹಾಲಿ ಸಹಾಯಕ ನಿರ್ದೇಶಕರು, ಪಶು ಪಾಲನಾ ಮತ್ತು ಪಶು ವೈದ್ಯ ಸೇವಾ ಇಲಾಖೆ, ಪಶು ಆಸ್ಪತ್ರೆ ಕುಷ್ಟಗಿ, ಕೊಪ್ಪಳ ಜಿಲ್ಲೆ ಇವರ ವಿರುದ್ಧ ಮಾಡಿರುವ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ಜರುಗಿಸಲು ಶ್ರೀ ಡಿ.ವಿ.ಶೇಟ, ನಿವೃತ್ತ ನ್ಯಾಯಾಧೀಶರು, ಇವರನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ), ನಿಯಮಾವಳಿಗಳು 1957ರ ನಿಯಮ 11(2) ರಲ್ಲಿ ಪ್ರದತ್ತವಾದ ಅಧಿಕಾರದನ್ವಯ

ವಿಚಾರಣಾಧಿಕಾರಿಯನ್ನಾಗಿ ಮತ್ತು ಸಹಾಯಕ ಕಾರ್ಯದರ್ಶಿ ಜಿಲ್ಲಾ ಪಂಚಾಯತಿ, ಕೊಪ್ಪಳ ಇವರನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11(5)(ಸಿ) ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಮಂಡನಾಧಿಕಾರಿಯಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನ ಪ್ರಕಾರ ವಿಚಾರಣೆ ಜರುಗಿಸಿ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗದಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೊಪ್ಪಳ/ಧಾರವಾಡ
3. ಶ್ರೀ ಡಿ.ವಿ.ಶೇಟ, ನಿವೃತ್ತ ನ್ಯಾಯಾಧೀಶರು, ಆದರ್ಶ ಸೈದಾಪೂರ ಧಾರವಾಡ-580008
4. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಕೊಪ್ಪಳ (ಮಂಡನಾಧಿಕಾರಿ).
5. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೊಪ್ಪಳ ಇವರ ಮುಖಾಂತರ)
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ (ಆಡಳಿತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
7. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.